# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ :- 22/06/2022 ರಂದು ವಾರ್ಡ್-48ರ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿ

ಸಭೆಗೆ ಹಾಜರಿದ್ದ ಅಧಿಕಾರಿಗಳು :-

- ಶ್ರೀ. ಬಿ.ಜೆ. ದೇವರಾಜ್, ನೋಡಲ್ ಅಧಿಕಾರಿ. (ನಿವೃತ್ತಿ)
- ಶ್ರೀ. ಬಸವರಾಜು, ವಾರ್ಡ್ ಇಂಜಿನೀಯರ್.
- ಶ್ರೀ. ವೆಂಕಟೇಶ್, ಹಿರಿಯ ಆರೋಗ್ಯ ಪರೀವಿಕ್ಷಕರು.
- ಶ್ರೀ. ರಾಹುಲ್ ಕಿರಿಯ ಅಭಿಯಂತರರು ಬಿ.ಡಬ್ಲೂ.ಎಸ್.ಎಸ್.ಬಿ.
- ಶ್ರೀ. ಮುರಳಿ ಕಂದಾಯ ಪರೀವಿಕ್ಷಕರು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸದಸ್ಯ ಕಾರ್ಯದರ್ಶಿರವರು ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿದರು. ವಾರ್ಡ್ ಸಮಿತಿ ಸಭೆಯನ್ನು ಕಂದಾಯ ಕಛೇರಿಯಲ್ಲಿ ನಡೆಸಲಾಯಿತು. ನೋಡಲ್ ಅಧಿಕಾರಿ ರವರು ವಾರ್ಡ್‌ನ ಸಾರ್ವಜನಿಕರ ಕುಂದು ಕೋರತೆಗಳು ಸಮಿತಿ ಸಭೆಯ ಸದಸ್ಯರವರೊಂದಿಗೆ ಹಾಗೂ ಅಧಿಕಾರಿಗಳ ಜೊತೆಯಲ್ಲಿ ಚರ್ಚಿಸಿದರು ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳವ ಬಗ್ಗೆ ಸಂಬಂದಪಟ್ಟ ಅಧಿಕಾರಿ ಹಾಗೂ ನೌಕರರುಗಳಿಗೆ ಈ ಕೆಳಕಂಡಂತೆ ತಿಳಿಸಲಾಗಿರುತ್ತದೆ.

### ➢ ಕಾಮಗಾರಿ ಇಲಾಖೆಗೆ ಸಂಬಂದಿಸಿರುವುದು

- ವಾರ್ಡ್ ವ್ಯಾಪ್ತಿಯಲ್ಲಿ ಡಿ.ಜೆ.ಹಳ್ಳಿ ಮುಖ್ಯ ರಸ್ತೆ ಬದಿಯ ಚರಂಡಿಯನ್ನು ಸ್ವಚ್ಚಗೊಳಿಸಲು ವಾರ್ಡ್ ಇಂಜಿನಿಯರ್‌ರವರಿಗೆ ಸೂಚಿಸಿದರು.

**ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗಳಿಗೆ ಪರಿಹರಿಸುವಂತೆ ವಾರ್ಡ್ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು**

### ➢ ಆರೋಗ್ಯ ಇಲಾಖೆಗೆ ಸಂಬಂಧಿಸಿರುವುದು

- ವಾರ್ಡ್ ವ್ಯಾಪ್ತಿಯಲ್ಲಿ ಪೇರಿಯಾರ್‌ನಗರ ರಸ್ತೆ ಬದಿಯ ತರಕಾರಿ ಮಾರಾಟಗಾರರಿಗೆ ಪರವಾನಗಿ ನೀಡಿದ್ದೀರ ಅಥವಾ ಇಲ್ಲಾ ಎಂದು ಪರಿಶೀಲನೆ ನಡೆಸಿ ಹಾಗೂ ಪರವಾನಗಿ ಪಡೆಯದೆ ಮಾರಾಟ ಮಾಡುವ ವ್ಯಾಪಾರಿಗಳನ್ನು ಕೂಡಲೇ ತೇರೆವುಗೊಳಿಸಲು ಸೂಚಿಸಿದರು.

**ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗಳನ್ನು ಕೂಡಲೆ ಪರಿಹರಿಸುವಂತೆ ಹಿರಿಯ ಆರೋಗ್ಯ ಪರೀವಿಕ್ಷಕರು ಈ ಸಭೆ ಮುಖಾಂತರ ಸೂಚಿಸಲಾಯಿತು.**

➢ <u>ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಗೆ ಸಂಬಂಧಿಸಿರುವುದು</u>

- ವಾರ್ಡ್ ವ್ಯಾಪ್ತಿಯಲ್ಲಿ ಶಿವಾಜಿ ರಸ್ತೆ, ಪೇರಿಯಾರ್‌ನಗರ ಅಡ್ಡ ರಸ್ತೆಯಲ್ಲಿ ಸ್ಯಾನಿಟರಿ ಪೈಪ್‌ಲೈನ್ ಬದಲಾಯಿಸಲು ಸೂಚಿಸಿದರು.

**ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗಳನ್ನು ಕೂಡಲೆ ಪರಿಹರಿಸುವಂತೆ ಕಿರಿಯ ಅಭಿಯಂತರರಿಗೆ ಈ ಸಭೆ ಮುಖಾಂತರ ಸೂಚಿಸಲಾಯಿತು.**

➢ <u>ಸ್ಟ್ರೀಟ್ ಲೈಟ್ ಇಲಾಖೆಗೆ ಸಂಬಂದಿಸಿರುವುದು</u>

- ವಾರ್ಡ್ ವ್ಯಾಪ್ತಿಯಲ್ಲಿನ ಶಾಂಪುರ ಮುಖ್ಯ ರಸ್ತೆ, ಚರ್ಮದ ಮಂಡಿ ರಸ್ತೆ, ಪೇರಿಯಾರ್‌ನಗರ, ಸ್ಟ್ರೀಟ್‌ಲೈಟ್‌ಗಳು ಕೆಟ್ಟು ಹೋಗಿದ್ದು ರಿಪೇರಿ ಮಾಡಲು ಸೂಚಿಸಿದರು.
- ವಾರ್ಡ್ ವ್ಯಾಪ್ತಿಯ ಫುಟ್‌ಬಾಲ್ ಗ್ರೌಂಡ್‌ನಲ್ಲಿ ಕ್ರಿಡಾ ಕಾರ್ಯಕ್ರಮಗಳನ್ನು ನಡೆಸಲು ಎಲ್.ಇ.ಡಿ ಲೈಟ್ ಅಳವಡಿಸಲು ಸೂಚಿಸಿದರು.

**ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗಳನ್ನು ಕೂಡಲೆ ಪರಿಹರಿಸುವಂತೆ ಸಹಾಯಕ ಅಭಿಯಂತರರಿಗೆ ಈ ಸಭೆ ಮುಖಾಂತರ ಸೂಚಿಸಲಾಯಿತು.**

ಈ ಎಲ್ಲಾ ವಿಷಯಗಳ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಂಬಂದಪಟ್ಟವರಿಗೆ ಸೂಚಿಸುತ್ತಾ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದೆ.

22/6/22

**ನೋಡಲ್ ಅಧಿಕಾರಿ/ ಸದಸ್ಯ ಕಾರ್ಯದರ್ಶಿ**
**ವಾರ್ಡ್–48**

**ಪ್ರತಿಗಳನ್ನು:**

- **ಮಾನ್ಯ ಆಡಳಿತಾಧಿಕಾರಿ, ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.**
- **ಮಾನ್ಯ ವಲಯ ಆಯುಕ್ತರು ರವರ ಮಾಹಿತಿಗಾಗಿ ಸಲ್ಲಿಸಿದೆ.**
- **ಮಾನ್ಯ ಜಂಟಿ ಆಯುಕ್ತರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ**
- **ಮುಖ್ಯ ಅಭೀಯಂತರರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ.**
- **ಕಾರ್ಯಪಾಲಕ ಅಭಿಯಂತರರು, ಪುಲಿಕೇಶಿನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.**
- **ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆ.ಜಿ.ಹಳ್ಳಿ ಉಪ–ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.**
- **ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನ ತ್ಯಾಜ್ಯ) ಪುಲಕೇಶಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.**
- **ಸಹಾಯಕ ಕಂದಾಯ ಅಧಿಕಾರಿ (ಕೆ.ಜಿ. ಹಳ್ಳಿ) ಉಪವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.**
- **ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ನೇತಾಜಿ ರಸ್ತೆ, ರವರ ಮಾಹಿತಿಗಾಗಿ ಸಲ್ಲಿಸಿದೆ.**
- **ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರ ಮಾಹಿತಿಗಾಗಿ ಸಲ್ಲಿಸಿದೆ.**
- **ಸಹಾಯಕ ಕಾರ್ಯಪಾಲಕ ಅಭಿಯಂತರರು (ಸ್ಟ್ರಿಟ್ ಲೈಟ್) ರವರ ಮಾಹಿತಿಗಾಗಿ ಸಲ್ಲಿಸಿದೆ.**
- **ಕಛೇರಿ ಪ್ರತಿ.**